(13)

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:–** ಶ್ರೀ ಸಿದ್ದಲಿಂಗಪ್ಪ, ಸಹಾಯಕ ಕೃಷಿ ಅಧಿಕಾರಿ, ಶ್ರೀ ಬಸವರಾಜ ಅಟ್ಟೂರ್, ಕೃಷಿ ಸಹಾಯಕ, ಮತ್ತು ಶ್ರೀ ಜಿ.ಜಿ. ವಾಲಿ, ಕೃಷಿ ಸಹಾಯಕ, ಜಲಾನಯನ ಅಭಿವೃದ್ಧಿ ಇಲಾಖೆ, ಆಳಂದ ಇವರ ವಿರುದ್ದ ಶಿಸ್ತುಕ್ರಮ ಕೈಗೊಳ್ಳಲು 14–ಎ ಪ್ರಕಾರ ಅನುಮತಿಯನ್ನು ನೀಡುವ ಬಗ್ಗೆ.

**ಓದಲಾಗಿದೆ:–**

1). ಅಪರ ನಿಂಬಂಧಕರು, ವಿಚಾರಣೆಗಳು–06, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಅ.ಸ.ಪತ್ರ ಸಂ. ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ–293/2011/ಡಿಆರ್‌ಇ–06, ದಿನಾಂಕ:30–10–2013,

2). ಉಪ ಲೋಕಾಯುಕ್ತರ ವರದಿ ಸಂ.ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ–293/2011/ ಡಿಆರ್‌ಇ–06, ದಿನಾಂಕ:26/28–10–2013.

**ಪ್ರಸ್ತಾವನೆ:–**

ಮೇಲೆ ಓದಲಾದ ಕ್ರ.ಸಂ.(1)ರ ಅರೆ ಸರ್ಕಾರಿ ಪತ್ರದಲ್ಲಿ ಅಪರ ನಿಂಬಂಧಕರು, ವಿಚಾರಣೆಗಳು–06 ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಗೌರವಾನ್ವಿತ ಉಪಲೋಕಾಯುಕ್ತ–1 ರವರ ದಿನಾಂಕ:28–10–2013 ರ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3)ರಂತೆ ವರದಿಯನ್ನು ಕಳುಹಿಸಿರುತ್ತಾರೆ. ಅವರು ತಮ್ಮ ವರದಿಯಲ್ಲಿ, ಶ್ರೀ ಸುಭಾಷ್ ಆರ್ ಗುತ್ತೇದಾರ್, ಮಾನ್ಯ ಶಾಸಕರು, ಆಳಂದ ವಿಧಾನಸಭಾ ಕ್ಷೇತ್ರ, ಇವರು ಜಲಾನಯನ ಅಭಿವೃದ್ಧಿ ಇಲಾಖೆ, ಆಳಂದ, ಗುಲ್ಬರ್ಗಾ ಜಿಲ್ಲೆ ಇಲ್ಲಿನ ತಾಲ್ಲೂಕು ಕಛೇರಿಯ ಅಧಿಕಾರಿಗಳಾದ 1). ಶ್ರೀ ಸಿದ್ದಲಿಂಗಪ್ಪ, ಹಿಂದಿನ ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಆಳಂದ ತಾಲ್ಲೂಕು, ಗುಲ್ಬರ್ಗಾ ಜಿಲ್ಲೆ ಪ್ರಸ್ತುತ ಸಹಾಯಕ ಕೃಷಿ ಅಧಿಕಾರಿಗಳು, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ರೈತ ಸಂಪರ್ಕ ಕೇಂದ್ರ, ಗುರುಮಿತ್ಕಲ್, ಯಾದಗಿರಿ ಜಿಲ್ಲೆ, 2). ಶ್ರೀ ಬಸವರಾಜ್ ಅಟ್ಟೂರ್, ಹಿಂದಿನ ಕೃಷಿ ಸಹಾಯಕರು, ಜಲಾನಯನ ಅಭಿವೃದ್ಧಿ ಇಲಾಖೆ, ಆಳಂದ ತಾಲ್ಲೂಕು, ಗುಲ್ಬರ್ಗಾ ಜಿಲ್ಲೆ ಪ್ರಸ್ತುತ ಕೃಷಿ ಸಹಾಯಕರು, ಮತ್ತು 3). ಶ್ರೀ ಜಿ.ಜಿ.ವಾಲಿ, ಹಿಂದಿನ ಸಹಾಯಕ ಕೃಷಿ ಅಧಿಕಾರಿಗಳು, ಜಲಾನಯನ ಅಭಿವೃದ್ಧಿ ಇಲಾಖೆ, ಆಳಂದ ತಾಲ್ಲೂಕು, ಗುಲ್ಬರ್ಗಾ ಜಿಲ್ಲೆ ಪ್ರಸ್ತುತ ಜಲಾನಯನ ಅಭಿವೃದ್ಧಿ ಇಲಾಖೆ, ಶಹಾಪುರ, ಯಾದಗಿರಿ ಜಿಲ್ಲೆ ಇವರುಗಳು ಜಲಾನಯನ ಅಭಿವೃದ್ಧಿ ಇಲಾಖೆಯಡಿಯಲ್ಲಿ ಕೈಗೊಳ್ಳಲಾದ ರಾಷ್ಟ್ರೀಯ ಜಲಾನಯನ ಅಭಿವೃದ್ಧಿ ಯೋಜನೆ, ಜಲಶ್ರೀ ಯೋಜನೆ, ಆರ್.ಕೆ.ವಿ.ವೈ ಯೋಜನೆ ಮತ್ತು ಇತರ ಯೋಜನೆಗಳಡಿಯಲ್ಲಿ, ಅವ್ಯವಹಾರದಲ್ಲಿ ಭಾಗಿಯಾಗಿರುವರೆಂದು ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದು, ಸದರಿ ದೂರಿನ ಮೇಲೆ ಡೆಪ್ಯೂಟಿ ಸೂಪರಿಟೆಂಡೆಂಟ್ ಆಫ್ ಪೋಲಿಸ್, ಕರ್ನಾಟಕ ಲೋಕಾಯುಕ್ತ, ಗುಲ್ಬರ್ಗಾ, ಇವರು ಸದರಿ ಪ್ರಕರಣದಲ್ಲಿ ತನಿಖೆ ನಡೆಸಿ, ವರದಿಯನ್ನು ನೀಡಿರುತ್ತಾರೆ. ಅವರು ತಮ್ಮ ತನಿಖಾ ವರದಿಯಲ್ಲಿ, ಸದರಿಯವರ ವಿರುದ್ದದ ಪ್ರಾಥಮಿಕ ತನಿಖೆಯಿಂದ ಸಾಬೀತಾಗಿರುವ ಹಿನ್ನೆಲೆಯಲ್ಲಿ, ಸದರಿಯವರ ದುರ್ನಡತೆಗೆ ಸಂಬಂಧಿಸಿದಂತೆ, ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ಸಿಸಿಎ) ನಿಯಮಗಳು 1957ರಡಿ ವಿಚಾರಣೆ ನಡೆಸಲು ನಿಯಮಾವಳಿ ನಿಯಮ 14(ಎ) ರಡಿ ಪ್ರಕರಣವನ್ನು ತಮಗೆ ವಹಿಸುವಂತೆ ಕೋರಿರುವರು.

ಅಪರ ನಿಂಬಂಧಕರು, ವಿಚಾರಣೆಗಳು-06 ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ರವರ ಪ್ರಸ್ತಾವದಂತೆ ಪ್ರಕರಣದಲ್ಲಿ ಲೋಪ ಎಸಗಿದ ಸದರಿಯವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ.) ನಿಯಮಾವಳಿ 1957ರ ನಿಯಮ 11 ರಡಿ ನಿರೂಪಿಸಿರುವಂತೆ ಶಿಸ್ತು ಕ್ರಮ ಜರುಗಿಸಲು ಪ್ರಕರಣವನ್ನು ಅದೇ ನಿಯಮಾವಳಿ ನಿಯಮ 14(ಎ) ರನ್ವಯ ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಿಕೊಡಲು ತೀರ್ಮಾನಿಸಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಕೃಇ 75 ಕೃಪವಿ 2013**
**ಬೆಂಗಳೂರು, ದಿನಾಂಕ:16-05-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಜಲಾನಯನ ಅಭಿವೃದ್ಧಿ ಇಲಾಖೆ, ಆಳಂದ ತಾಲ್ಲೂಕು, ಗುಲ್ಬರ್ಗಾ(ಜಿ), ಇಲ್ಲಿನ 1). ಶ್ರೀ ಸಿದ್ದಲಿಂಗಪ್ಪ, ಹಿಂದಿನ ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಆಳಂದ ತಾಲ್ಲೂಕು, ಗುಲ್ಬರ್ಗಾ ಜಿಲ್ಲೆ ಪ್ರಸ್ತುತ ಸಹಾಯಕ ಕೃಷಿ ಅಧಿಕಾರಿಗಳು, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ರೈತ ಸಂಪರ್ಕ ಕೇಂದ್ರ, ಗುರುಮಿಠ್ಕಲ್, ಯಾದಗಿರಿ ಜಿಲ್ಲೆ, 2). ಶ್ರೀ ಬಸವರಾಜ್ ಅಟ್ಟೂರ್, ಹಿಂದಿನ ಕೃಷಿ ಸಹಾಯಕರು, ಜಲಾನಯನ ಅಭಿವೃದ್ಧಿ ಇಲಾಖೆ, ಆಳಂದ ತಾಲ್ಲೂಕು, ಗುಲ್ಬರ್ಗಾ ಜಿಲ್ಲೆ ಪ್ರಸ್ತುತ ಕೃಷಿ ಸಹಾಯಕರು, ಜಲಾನಯನ ಅಭಿವೃದ್ಧಿ ಇಲಾಖೆ, ಶಹಾಪುರ, ಯಾದಗಿರಿ ಜಿಲ್ಲೆ ಮತ್ತು 3). ಶ್ರೀ ಜಿ.ಜಿ.ವಾಲಿ, ಹಿಂದಿನ ಸಹಾಯಕ ಕೃಷಿ ಅಧಿಕಾರಿಗಳು, ಜಲಾನಯನ ಅಭಿವೃದ್ಧಿ ಇಲಾಖೆ, ಆಳಂದ ತಾಲ್ಲೂಕು, ಗುಲ್ಬರ್ಗಾ ಜಿಲ್ಲೆ ಪ್ರಸ್ತುತ ಸಹಾಯಕ ಕೃಷಿ ಅಧಿಕಾರಿಗಳು ಜಲಾನಯನ ಅಭಿವೃದ್ಧಿ ಇಲಾಖೆ, ಶಹಾಪುರ, ಯಾದಗಿರಿ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮಾವಳಿ 1957ರ ನಿಯಮ 11 ರಡಿ ನಿರೂಪಿಸಿರುವಂತೆ ಇಲಾಖಾ ವಿಚಾರಣಾ ಕ್ರಮವನ್ನು ಆಯೋಜಿಸಲು ಅದೇ ನಿಯಮಾವಳಿ ನಿಯಮ 14(ಎ)ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ ಜಿಇ-05) ಕರ್ನಾಟಕ, ಬೆಂಗಳೂರು.
2. ಗೌರವಾನ್ವಿತ ಉಪ ಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

--3--

3. ಅಪರ ನಿಬಂಧಕರು ವಿಚಾರಣೆಗಳು-06 ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
5. ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳು ಗಲ್ಬಾರ್ಗಾ ಜಿಲ್ಲೆ
6. ಸಹಾಯಕ ಕೃಷಿ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಅಧಿಕಾರಿಗಳು ಆಳಂದ ತಾಲ್ಲೂಕು, ಗುಲ್ಬರ್ಗಾ ಜಿಲ್ಲೆ.
7. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ,
9. ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ-1, ಕೃಷಿ ಇಲಾಖೆರವರಿಗೆ.
11. ಸಮನ್ವಯಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.